# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ – ೪ಎ<br>Part – IVA | ಬೆಂಗಳೂರು, ಶುಕ್ರವಾರ, ೧೨ ಸೆಪ್ಟೆಂಬರ್, ೨೦೨೫ (ಭಾದ್ರಪದ ೨೧, ಶಕವರ್ಷ ೧೯೪೭)<br>BENGALURU, FRIDAY, 12 SEPTEMBER, 2025 (BHADRAPADA 21, SHAKAVARSHA 1947) | ನಂ. ೫೭೯<br>No. 579 |
|---|---|---|


**<u>ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ</u>**

**<u>ಅಧಿಸೂಚನೆ</u>**

**<u>ಸಂಖ್ಯೆ: ಸಂವ್ಯಶಾಇ 32 ಶಾಸನ 2023, ಬೆಂಗಳೂರು, ದಿನಾಂಕ: 12.09.2025</u>**

ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025 ಇದಕ್ಕೆ 2025ರ ಸೆಪ್ಟೆಂಬರ್ ತಿಂಗಳ 11ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2025ರ ಕರ್ನಾಟಕ ಅಧಿನಿಯಮ ಸಂಖ್ಯೆ: 66 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ (ಭಾಗ IV-A) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

**2025 ರ ಕರ್ನಾಟಕ ಅಧಿನಿಯಮ ಸಂಖ್ಯೆ: 66**

(2025ರ ಸೆಪ್ಟೆಂಬರ್ ತಿಂಗಳ 12ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025

(2025ರ ಸೆಪ್ಟೆಂಬರ್ ತಿಂಗಳ 11ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ ಅಧಿನಿಯಮ, 2024ನ್ನು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ ಅಧಿನಿಯಮ, 2024 (2025ರ ಕರ್ನಾಟಕ ಅಧಿನಿಯಮ ಸಂ. 38)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು 2025ರ ಮೇ, 23ನೇ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ ಅಧಿನಿಯಮ, 2024 (2025ರ ಕರ್ನಾಟಕ ಅಧಿನಿಯಮ ಸಂ. 38)ರ 3ನೇ ಪ್ರಕರಣದ (3)ನೇ ಉಪ-ಪ್ರಕರಣದಲ್ಲಿರುವ (ಸಿ) ಖಂಡದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"

| | | |
|---|---|---|
| (ಸಿ-i) | ಪ್ರಾಧಿಕಾರದ ಅಧಿಕಾರ ವ್ಯಾಪ್ತಿಯೊಳಗೆ ಬರುವ ಪ್ರಾದೇಶಿಕ ಮತಕ್ಷೇತ್ರದ ಸಂಸತ್ ಸದಸ್ಯರು | ಪದನಿಮಿತ್ತ ಸದಸ್ಯರು |
| (ಸಿ-ii) | ಪ್ರಾಧಿಕಾರದ ಅಧಿಕಾರ ವ್ಯಾಪ್ತಿಯೊಳಗೆ ಬರುವ ಪ್ರಾದೇಶಿಕ ಮತಕ್ಷೇತ್ರದ ಕರ್ನಾಟಕ ರಾಜ್ಯ ವಿಧಾನ ಪರಿಷತ್ ಸದಸ್ಯರುಗಳ ಪೈಕಿ ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿಯವರು ನಾಮನಿರ್ದೇಶಿಸಿದ ಒಬ್ಬ ಸದ್ಯಸ್ಯರು | ಪದನಿಮಿತ್ತ ಸದಸ್ಯರು |
| (ಸಿ-iii) | ಅಧ್ಯಕ್ಷರು, ನಗರ ಸಭೆ, ಗದಗ -ಬೆಟಗೇರಿ | ಪದನಿಮಿತ್ತ ಸದಸ್ಯರು |
| (ಸಿ-iv) | ವಿರೋಧ ಪಕ್ಷದ ನಾಯಕರು, ನಗರ ಸಭೆ, ಗದಗ-ಬೆಟಗೇರಿ | ಪದನಿಮಿತ್ತ ಸದಸ್ಯರು |
| (ಸಿ-v) | ಉಪಾಧ್ಯಕ್ಷರು, ನಗರ ಸಭೆ, ಗದಗ-ಬೆಟಗೇರಿ | ಪದನಿಮಿತ್ತ ಸದಸ್ಯರು |
| (ಸಿ-vi) | ಗದಗ-ಬೆಟಗೇರಿ ನಗರ ಸಭೆಯ ಎಲ್ಲಾ ಸ್ಥಾಯಿ ಸಮಿತಿಗಳ ಅಧ್ಯಕ್ಷರು, | ಪದನಿಮಿತ್ತ ಸದಸ್ಯರು |

"

**3. ನಿರಸನ ಮತ್ತು ಉಳಿಸುವಿಕೆಗಳು.-** (1) ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ ಅಧ್ಯಾದೇಶ, 2025 (2025ರ ಕರ್ನಾಟಕ ಅಧ್ಯಾದೇಶ ಸಂ. 03)ನ್ನು ಈ ಮೂಲಕ ನಿರಸನಗೊಳಿಸಲಾಗಿದೆ.

(2) ಅಂಥ ನಿರಸನವು ಏನೇ ಒಳಗೊಂಡಿದ್ದರೂ ಸದರಿ ಅಧ್ಯಾದೇಶದ ಮೂಲಕ ತಿದ್ದುಪಡಿಯಾದಂತೆ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾದ ಯಾವುದೇ ಕಾರ್ಯ ಅಥವಾ ತೆಗೆದುಕೊಂಡ ಯಾವುದೇ ಕ್ರಮವನ್ನು, ಈ ಅಧಿನಿಯಮದ ಅಡಿಯಲ್ಲಿ ತಿದ್ದುಪಡಿಯಾದಂತೆ ಅದನ್ನು ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ತೆಗೆದುಕೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

**DEPARTMENT OF PARLIAMENTARY AFFAIRS AND LEGISLATION SECRETARIAT**

**NOTIFICATION**

**NO: DPAL 32 SHASANA 2023, BENGALURU, DATED: 12.09.2025**

ಭಾರತ ಸಂವಿಧಾನದ ಅನುಚ್ಛೇದ 348ರಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025 (2025ರ ಕರ್ನಾಟಕ ಅಧಿನಿಯಮ ಸಂಖ್ಯೆ: 66)ರ ಭಾಷಾಂತರವನ್ನು ಅಧಿಕೃತ ಆಂಗ್ಲ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದಲ್ಲಿ (ಭಾಗ IV-A) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

## KARNATAKA ACT NO. 66 OF 2025

(First published in the Karnataka Gazette Extra-ordinary on the 12th day of September, 2025)

## GADAG-BETAGERI BUSINESS, CULTURE AND EXHIBITION AUTHORITY (AMENDMENT) ACT, 2025

(Received the assent of the Governor on the 11th day of September, 2025)

An Act to amend the Gadag-Betageri Business, Culture and Exhibition Authority Act, 2024.

Whereas it is expedient to amend the Gadag-Betageri Business, Culture and Exhibition Authority Act, 2024 (Karnataka Act No. 38 of 2025) for the purposes hereinafter appearing;

Be it enacted by the Karnataka State Legislature in the seventy sixth year of the Republic of India as follows:-

**1. Short title and commencement.-** (1) This Act may be called the Gadag-Betageri Business, Culture and Exhibition Authority (Amendment) Act, 2025.

(2) It shall be deemed to have come into force with effect from 23rd day of May, 2025.

**2. Amendment of section 3.-** In the Gadag-Betageri Business, Culture and Exhibition Authority Act, 2024 (Karnataka Act No. 38 of 2025), in section 3, in sub-section (3), after clause (c), the following shall be inserted, namely:-

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



“

| | | |
|---|---|---|
| (c-i) | The Member of Parliament whose territorial constituency lies within the jurisdiction of the Authority | Ex-officio Member |
| (c-ii) | Among the Members of the Karnataka State Legislative Council whose territorial constituency lies within the jurisdiction of the Authority, one Member nominated by the Chairman of Karnataka Legislative Council. | Ex-officio Members |
| (c-iii) | The President, City Municipal Council, Gadag - Betageri | Ex-officio Member |
| (c-iv) | The Leader of the opposition party, City Municipal Council, Gadag - Betageri | Ex-officio Member |
| (c-v) | The Vice-President, City Municipal Council, Gadag - Betageri | Ex-officio Member |
| (c-vi) | All Chairpersons of the Standing Committees of the City Municipal Council Gadag - Betageri | Ex-officio Members |

”

**3. Repeal and savings.-** (1) The Gadag-Betageri Business, Culture and Exhibition Authority (Amendment) Ordinance, 2025 (Karnataka Ordinance No. 03 of 2025) is hereby repealed.

(2) Notwithstanding such repeal anything done or any action taken under the Principal Act, as amended by the said Ordinance, shall be deemed to have been done or taken under the Principal Act, as amended by this Act.

The above translation of ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025 (2025ರ ಕರ್ನಾಟಕ ಅಧಿನಿಯಮ ಸಂಖ್ಯೆ: 66) be published in the official Gazette under Article 348 of the Constitution of India.

**THAAWARCHAND GEHLOT**
**GOVERNOR OF KARNATAKA**

By Order and in the name of
**the Governor of Karnataka,**

**G. Sridhar**
Secretary to Government
Department of Parliamentary Affairs
and Legislation

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH